ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಗುರುವಾರ, ದಿನಾಂಕ : 19 ನೇ ಮಾರ್ಚ್, 2020

ಸಿವಿಲ್ ನ್ಯಾಯಾಲಯದ ಅವಶ್ಯಕತೆ ಕುರಿತು

ಶ್ರೀ ಘೋಟ್ನೇಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

1284 (1419) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕಾರವಾರ ಜಿಲ್ಲೆಯ ಜೋಯಿಡಾ ತಾಲ್ಲೂಕಿನಲ್ಲಿ ಸಿವಿಲ್ ನ್ಯಾಯಾಲಯ ಸ್ಥಾಪಿಸಬೇಕು ಎಂದು ಆಗ್ರಹಿಸಿ ವಿವಿಧ ಸಂಘಟನೆಗಳ ಕಾರ್ಯಕರ್ತರು ದೊಡ್ಡ ಪ್ರಮಾಣದಲ್ಲಿ ಪ್ರತಿಭಟನೆ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆಯೇ ; (ವಿವರ ನೀಡುವುದು)

(ಆ) ಜೋಯಿಡಾ ತಾಲ್ಲೂಕಿಗೆ ಸಂಬಂಧಿಸಿದಂತೆ ಯಾವುದೇ ಸೌಲಭ್ಯಗಳು ನ್ಯಾಯಯುತವಾಗಿ ಸಿಗುತ್ತಿಲ್ಲವಾದ್ದರಿಂದ ಪ್ರತಿಯೊಂದು ಸೌಲಭ್ಯಗಳನ್ನು ಹೋರಾಟ ಮಾಡಿಯೇ ಪಡೆಯಬೇಕಾಗಿರುತ್ತದೆಯೆಂದು ಸಾರ್ವಜನಿಕರು ಆಕ್ರೋಶ ವ್ಯಕ್ತಪಡಿಸಿರುವುದರಿಂದ ನ್ಯಾಯಾಲಯ ಸ್ಥಾಪಿಸುವ ಯೋಚನೆ ಸರ್ಕಾರದ ಮುಂದಿದೆಯೇ ? (ವಿವರ ನೀಡುವುದು)